ಖು) ಇವರ ಕಾರ್ಯವ್ಯಾಪ್ತಿ ಕಾರ್ಕಳ ತಾಲ್ಲೂಕು. ಇವರ ಕಾರ್ಯಸ್ವರೂಪಗಳು ಕೆಳಕಂಡಂತಿದೆ.

1. ರೇಷ್ಮೆ ಕೃಷಿ ಚಟುವಟಿಕೆಗಳಾದ ಹಿಪ್ಪುನೇರಳೆ ವ್ಯವಸಾಯ, ರೇಷ್ಮೆ ಹುಳು ಸಾಕಾಣಿಕೆ, ನೂಲು ಬಿಚ್ಚಾಣಿಕೆ ಇತ್ಯಾದಿಗಳ ಬಗ್ಗೆ ತಾಂತ್ರಿಕ ಮಾರ್ಗದರ್ಶನ ನೀಡುವುದು ಮತ್ತು ತರಬೇತಿ ಒದಗಿಸುವುದು.
2. ಅಧಿಕ ಇಳುವರಿ ನೀಡುವ ಹಿಪ್ಪುನೇರಳೆ ತಳಿಗಳನ್ನು ಕಿಸಾನ್ ನರ್ಸರಿಗಳಲ್ಲಿ ಅಭಿವೃದ್ಧಿಪಡಿಸಿ ಒದಗಿಸುವುದು.
3. ರೇಷ್ಮೆ ಬೆಳೆಗಾರರಿಗೆ ವಿಸ್ತರಣೆ, ಚಾಕಿ ಸಾಕಣೆ ಮತ್ತು ರೋಗ ನಿಯಂತ್ರಣ ಸೌಲಭ್ಯಗಳನ್ನು ಒದಗಿಸುವುದು.
4. ರೇಷ್ಮೆ ಚಟುವಟಿಕೆಗಳಿಗಾಗಿ ಬ್ಯಾಂಕುಗಳಿಂದ ಸಾಲ/ಸೌಲಭ್ಯ ಪಡೆಯಲು ರೈತರಿಗೆ ಸಹಾಯ ಮಾಡುವುದು.
5. ರೇಷ್ಮೆ ಬೆಳೆಗಾರರು ಹೊಸ ತಾಂತ್ರಿಕತೆಗಳನ್ನು ಅಳವಡಿಸಿ, ಉತ್ಪಾದನೆ, ಉತ್ಪಾದಕತೆ ಮತ್ತು ಗುಣಮಟ್ಟ ಹೆಚ್ಚಿಸಿ, ಉತ್ಪಾದನಾ ವೆಚ್ಚ ಕಡಿಮೆ ಮಾಡಿ ಆದಾಯ ಹೆಚ್ಚಿಸಲು ಪ್ರೇರೇಪಿಸುವುದು.
6. ಸ್ಥಳೀಯವಾಗಿ ನೂಲು ಬಿಚ್ಚಾಣಿಕೆ ಘಟಕದಿಂದ ಗೂಡು ಖರೀದಿಗೆ ವ್ಯವಸ್ಥೆ ಮಾಡಲಾಗಿದೆ.

5151 (5621) ಶೀ ಸುನೀಲ್ ಕುಮಾರ್ ವಿ. (ಕಾರ್ಕಳ): ಮಾನ್ಯ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮೂಲಭೂತ ಸೌಕರ್ಯ ಅಭಿವೃದ್ಧಿ ಯೋಜನೆಯಡಿಯಲ್ಲಿ, ರಾಜ್ಯದಲ್ಲಿ ಹೊಸ ವಿಮಾನ ನಿಲ್ದಾಣ ಪ್ರಾರಂಭಿಸಲು ಸರ್ಕಾರ ಯೋಚಿಸಿದೆಯೇ, ಎಲ್ಲೆಲ್ಲಿ ಪ್ರಾರಂಭಿಸಲಾಗುವುದು; (ವಿವರ ಒದಗಿಸುವುದು)

ಆ) ಈ ನಿಟ್ಟಿನಲ್ಲಿ ಉಡುಪಿ ಜಿಲ್ಲೆಯ ಯಾವ ಸ್ಥಳವನ್ನು ಗುರುತಿಸಿ ಸೇರ್ಪಡೆಗೊಳಿಸಿದೆ;

ಇ) ವಿಮಾನ ನಿಲ್ದಾಣ ಯೋಜನೆಗೆ ಒದಗಿಸಿರುವ ಹಣದ ವಿವರಗಳೇನು, ಹಾಲಿ ಇರುವ ನಿಲ್ದಾಣಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದೇ;

ಈ) ಹಾಗಿದ್ದಲ್ಲಿ ವಿವರ ನೀಡುವುದು?

ಶ್ರೀ ಪಿ. ಜಿ. ಆರ್. ಸಿಂಧ್ಯ (ಮಾನ್ಯ ಕೈಗಾರಿಕೆ ಮತ್ತು ಮೂಲಸೌಲಭ್ಯ ಸಚಿವರು):

ಅ) ರಾಜ್ಯದಲ್ಲಿ ಗುಲ್ಬರ್ಗಾ, ಹಾಸನ, ಬಿಜಾಪುರಗಳಲ್ಲಿ ಹೊಸ ವಿಮಾನ ನಿಲ್ದಾಣ ಪ್ರಾರಂಭಿಸಲು ಯೋಚಿಸಲಾಗಿದೆ.

ಆ) ಯಾವ ಸ್ಥಳವನ್ನು ಗುರುತಿಸಿರುವುದಿಲ್ಲ.

ಇ) ಗುಲ್ಬರ್ಗಾ ಹಾಗೂ ಹಾಸನದಲ್ಲಿ ಭೂಸ್ವಾಧೀನ ಕೈಗೊಳ್ಳಲಾಗಿದೆ. ಬಿಜಾಪುರದಲ್ಲಿ ಸ್ಥಳ ಪರಿಶೀಲನೆ ಮಾಡಿ ಗುರುತಿಸಬೇಕಾಗಿದೆ. ಹಾಲಿ ಇರುವ ವಿಮಾನ ನಿಲ್ದಾಣಗಳಾದ ಮೈಸೂರು ವಿಮಾನ ನಿಲ್ದಾಣವನ್ನು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ನಿರ್ಮಿಸಿ ಅಭಿವೃದ್ಧಿಪಡಿಸಲು ನಾಗರೀಕ ವಿಮಾನಯಾನ ಮಂತ್ರಾಲಯ ಒಪ್ಪಿದ್ದು ಒಂದು ಒಡಂಬಡಿಕೆ ಏರ್ಪಡಬೇಕಾಗಿದೆ. ಮಂಗಳೂರು ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಬೇಕಾದ ಭೂಮಿಯನ್ನು ಭಾರತೀಯ

ವಿಮಾನ ನಿಲ್ದಾಣ ಪ್ರಾಧಿಕಾರಕ್ಕೆ ಒದಗಿಸಲಾಗಿರುತ್ತದೆ. ಗುಲ್ಬರ್ಗಾ ಹಾಗೂ ಹಾಸನ ವಿಮಾನ ನಿಲ್ದಾಣಗಳನ್ನು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ನಿರ್ಮಿಸಿ ಕಾರ್ಯಾಚರಣೆಗೊಳಿಸುವಂತೆ ಪ್ರಸ್ತಾವನೆಯೊಂದನ್ನು ನಾಗರೀಕ ವಿಮಾನಯಾನ ಮಂತ್ರಾಲಯ ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದ್ದು, ಅವರ ಅನು;ಮತಿಯನ್ನು ನಿರೀಕ್ಷಿಸಲಾಗಿದೆ.

5152 (5908) ಶೀ ಸುನೀಲ್ ವಲ್ಲಾಪುರಿ (ಶಹಾಬಾದ್): ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಅನುಗುಣವಾಗಿ ವಾರ್ಡನ್‌ಗಳು ಇದ್ದಾರೆಯೇ;

ಆ) ಈ ವಾರ್ಡನ್‌ಗಳು ಹಾಜರಾಗದೇ ಇರುವುದರಿಂದ ಮಕ್ಕಳಿಗೆ ಸರಿಯಾದ ಸೌಲಭ್ಯ ಒದಗಿಸುತ್ತಿಲ್ಲದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ತೆಗೆದುಕೊಂಡ ಕ್ರಮವೇನು?

ಇ) ಶಹಾಬಾದ್ ವಿಧಾನ ಸಭಾ ಕ್ಷೇತ್ರದಲ್ಲಿ ಕರ್ನಾಟಕ ಭೂ ಸೇನಾ ನಿಗಮದವರು ಕಟ್ಟಡ ನಿರ್ಮಾಣ ಕಾರ್ಯ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಸಮಾಜ ಕಲ್ಯಾಣ ಇಲಾಖೆಯ ವಸತಿ ವಿದ್ಯಾರ್ಥಿನಿಲಯಗಳಲ್ಲಿ ಯಾವ ಯಾವ ಹುದ್ದೆಗಳು ಖಾಲಿ ಇವೆ (ವಿವರ ಒದಗಿಸುವುದು)

ಉ) ಹಾಗಿದ್ದಲ್ಲಿ, ಭರ್ತಿ ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೆ;

ಊ) ವಿದ್ಯಾರ್ಥಿಗಳಿಗೆ ಅನುಗುಣವಾಗಿ ವಸತಿ ನಿಲಯಗಳು ಇವೆಯೇ? ಇಲ್ಲದಿದ್ದಲ್ಲಿ ವಿದ್ಯಾರ್ಥಿಗಳಿಗೆ ಅನುಗುಣವಾಗಿ ವಸತಿ ನಿಲಯಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದೇ; (ತಾಲ್ಲೂಕುವಾರು ವಿವರ ಒದಿಗಿಸುವುದು)

ಡಾ: ವೈ. ನಾಗಪ್ಪ (ಮಾನ್ಯ ಸಮಾಜ ಕಲ್ಯಾಣ ಸಚಿವರು) :

ಅ) ಹೌದು

ಆ) ಹೌದು,

ಈವರೆವಿಗೂ ಅಂತಹ 43 ವಾರ್ಡನ್‌ಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗಿದೆ.

ಇ) ಹೌದು

ಈ) ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರ ಕೆಳಕಂಡಂತಿದೆ.

1.	ವಾರ್ಡನ್‌ಗಳು	–247
2.	ಅಡುಗೆಯವರು	–792
3.	ಅಡುಗೆ ಸಹಾಯಕರು	–268
4.	ರಾತ್ರಿ ಕಾವಲುಗಾರರು	–110
	ಒಟ್ಟು	–1417

ಉ) ಹೌದು

ಊ) ಇಲ್ಲ.